Akashvani : Bangalore
Regional Bulletin In Kannada
10.03.2026 / 18.40 hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ವೈದ್ಯಾಧಿಕಾರಿಗಳ ಸಂಘದೊಂದಿಗೆ ನಡೆದ ಸಂಧಾನ ಸಭೆ ಯಶಸ್ವಿ; ಸರ್ಕಾರದಿಂದ ಎಲ್ಲಾ ಬೇಡಿಕೆ ಈಡೇರಿಸುವ ಭರವಸೆ
- ಬೆಂಗಳೂರಿನಲ್ಲಿ ವಾಣಿಜ್ಯ ಬಳಕೆ ಸಿಲಿಂಡರ್‌ಗಳ ಕೊರತೆ; ತಕ್ಷಣವೇ ಕ್ರಮಕೈಗೊಳ್ಳುವಂತೆ ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಪತ್ರ
- ಬೆಂಗಳೂರು ಕೆಂಪೇಗೌಡ ಬಸ್ ನಿಲ್ದಾಣ ಅಂತಾರಾಷ್ಟ್ರೀಯ ಮಟ್ಟದಲ್ಲಿ ಆಧುನೀಕರಣ- ಸಾರಿಗೆ ಸಚಿವ ರಾಮಲಿಂಗಾರೆಡ್ಡಿ
- ಸಿಂಧನೂರಿನಲ್ಲಿ ಜವಳಿ ಪಾರ್ಕ್ ಸ್ಥಾಪನೆಗೆ ೧೫ ಎಕರೆ ಜಮೀನು ನೀಡುವಂತೆ ಕೇಂದ್ರಕ್ಕೆ ರಾಜ್ಯ ಸರ್ಕಾರ ಪತ್ರ
- ಹಾಸನ ಜಿಲ್ಲೆಯ ಕೌಶಿಕ ಗ್ರಾಮದ ಕೊಳವೆ ಬಾವಿ ನೀರು ಪರೀಕ್ಷೆಗೆ ಸಚಿವ ಈಶ್ವರ್ ಖಂಡ್ರೆ ಸೂಚನೆ

***************

ರಾಜ್ಯ ಸರ್ಕಾರ ವೈದ್ಯಾಧಿಕಾರಿಗಳ ಸಂಘದೊಂದಿಗೆ ನಡೆಸಿದ ಸಂಧಾನ ಸಭೆ ಯಶಸ್ವಿಯಾಗಿದೆ.

ವಿಧಾನಸೌಧದಲ್ಲಿಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹಾಗೂ ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ವೈದ್ಯರ ಮನವೊಲಿಸುವಲ್ಲಿ ಯಶಸ್ವಿಯಾಗಿದ್ದಾರೆ.

ವೈದ್ಯರ ಸಂಘದ ಎಲ್ಲಾ ಬೇಡಿಕೆಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದ್ದಾರೆ. ವೈದ್ಯರು ಕರೆ ನೀಡಿರುವ ಬಂದ್ ವಾಪಸ್ ಪಡೆಯಬೇಕು ಎಂದು ಸೂಚಿಸಿದ್ದಾರೆ.

ಈ ಕುರಿತಂತೆ ಪ್ರತಿಕ್ರಿಯಿಸಿರುವ ವೈದ್ಯರ ಸಂಘ ಲಿಖಿತ ರೂಪದಲ್ಲಿ ಆದೇಶ ಬಂದ ಬಳಿಕ ತೀರ್ಮಾನ ತಿಳಿಸುವುದಾಗಿ ಸ್ಪಷ್ಟಪಡಿಸಿದೆ.

***************

ಬೆಂಗಳೂರಿನಲ್ಲಿ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳ  ಕೊರತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿಗೆ ಪತ್ರ ಬರೆದು ತಕ್ಷಣ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ.

ಬೆಂಗಳೂರಿನಲ್ಲಿ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಪೂರೈಕೆಗೆ ಮೇಲೆ ಭಾರಿ ಹೊಡೆತ ಬಿದ್ದಿದ್ದು, ಹೋಟೆಲ್ ಹಾಗೂ ರೆಸ್ಟೋರೆಂಟ್‌ಗಳು ಸಂಕಷ್ಟಕ್ಕೆ ಸಿಲುಕಿವೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಬೆಂಗಳೂರು ನಗರದಲ್ಲಿ ಸಾವಿರಾರು ಸಣ್ಣ ಹೋಟೆಲ್‌ಗಳು, ಮೆಸ್ಸುಗಳು ಮತ್ತು ಕೇಟರಿಂಗ್ ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರತಿದಿನ ಲಕ್ಷಾಂತರ ಜನರು ಇವುಗಳ ಮೇಲೆ ಅವಲಂಬಿತರಾಗಿದ್ದಾರೆ.

ವಿದ್ಯಾರ್ಥಿಗಳು ಹಾಗೂ ಉದ್ಯೋಗಕ್ಕಾಗಿ ಹೊರನಗರಗಳಿಂದ ಬಂದಿರುವ ಅನೇಕರು ದಿನನಿತ್ಯದ ಆಹಾರಕ್ಕಾಗಿ ಇಂತಹ ಹೋಟೆಲ್ ಮತ್ತು ಮೆಸ್ಸುಗಳನ್ನೇ ನಂಬಿಕೊಂಡಿದ್ದಾರೆ ಎಂದು ಮುಖ್ಯಮಂತ್ರಿ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

***************

ಬೆಂಗಳೂರಿನ ಕೆಂಪೇಗೌಡ ಬಸ್ ನಿಲ್ದಾಣವನ್ನು ಸಿಂಗಾಪುರಕ್ಕಿಂತಲೂ ಅತ್ಯಾಧುನಿಕ ಮಾದರಿಯಲ್ಲಿ ನಿರ್ಮಾಣ ಮಾಡಲಾಗುವುದು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

ವಿಧಾನಪರಿಷತ್‌ನಲ್ಲಿ ಸದಸ್ಯ ಎಂ.ನಾಗರಾಜು ನಿಯಮ ೩೩೦ ರಡಿ ಪ್ರಸ್ತಾಪಿಸಿದ ವಿಷಯಕ್ಕೆ ಉತ್ತರಿಸಿದ ಅವರು, ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಜಂಟಿಯಾಗಿ ಕೆಂಪೇಗೌಡ ಬಸ್ ನಿಲ್ದಾಣವನ್ನು

ಸಾರ್ವಜನಿಕ, ಖಾಸಗಿ ಸಹಭಾಗಿತ್ವದಲ್ಲಿ ಪ್ರಾಜೆಕ್ಟ್ ಮೆಜೆಸ್ಟಿಕ್ ಯೋಜನೆಯನ್ನು ಕೈಗೊಳ್ಳಲು ಮೂಲಸೌಕರ್ಯ ಅಭಿವೃದ್ಧಿ ಇಲಾಖೆ ಟೆಂಡರ್ ಪಡೆದವರಿಗೆ ಕಾರ್ಯಾದೇಶ ಪತ್ರ ನೀಡಿದೆ. ಟೆಂಡರ್ ದಸ್ತಾವೇಜನ್ನು ತಯಾರಿಸಲು ಸಂಚಾರ ಅಧ್ಯಯನ, ಮಾರುಕಟ್ಟೆ ಅಧ್ಯಯನ, ತಾಂತ್ರಿಕ ಪ್ರಕ್ರಿಯೆಗಳನ್ನು ಪ್ರಾರಂಭಿಸಲಾಗಿದೆ ಎಂದು  ಹೇಳಿದ್ದಾರೆ.

ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಬಸ್ಸುಗಳ ಕಾರ್ಯಾಚರಣೆಗೆ ಧಕ್ಕೆಯಾಗದಂತೆ ಯೋಜನೆ ಅನುಷ್ಠಾನಗೊಳಿಸಲು ಯೋಜಿಸಲಾಗಿದೆ. ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿಯ ಟಿಟಿಎಂಸಿಗಳನ್ನು ಕಾರ್ಯಾಚರಣೆಗೆ ಬಳಸಿಕೊಂಡು ಪ್ರಯಾಣಿಕರಿಗೆ ತೊಂದರೆ ಆಗದಂತೆ ಕುಡಿಯುವ ನೀರು, ಶೌಚಾಲಯ, ಆಸನ, ಮಹಿಳಾ ವಿಶ್ರಾಂತ ಕೊಠಡಿಗಳನ್ನು ತಾತ್ಕಾಲಿಕವಾಗಿ ಕಲ್ಪಿಸಿ ಯೋಜನೆ ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

***************

ಸಿಂಧನೂರು ತಾಲ್ಲೂಕಿನಲ್ಲಿ ಜವಳಿ ಪಾರ್ಕ್ ಸ್ಥಾಪನೆ ಮಾಡಲು ೧೫ ಎಕರೆ ಜಮೀನು ನೀಡುವಂತೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಜವಳಿ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ.

ವಿಧಾನಪರಿಷತ್‌ನಲ್ಲಿ ಸದಸ್ಯ ಬಸನಗೌಡ ಬಾದರ್ಲಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕೇಂದ್ರ ಸರ್ಕಾರದ ಅಧೀನದಲ್ಲಿರುವ ಸೆಂಟ್ರಲ್ ಸೀಡ್ಸ್ ಫಾರಂನಲ್ಲಿರುವ ೭ ಸಾವಿರದ ೫೦೦ ಎಕರೆ ಜಮೀನಿನಲ್ಲಿ ೧೫ ಎಕರೆ ನೀಡುವಂತೆ ಪತ್ರ ಬರೆಯಲಾಗಿದೆ. ಜಮೀನು ದೊರೆತರೆ ಪಿಪಿಪಿ ಮಾದರಿಯಲ್ಲಿ ಜವಳಿ ಪಾರ್ಕ್ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

***************

ಹಾಸನ ಜಿಲ್ಲೆಯ ಕೌಶಿಕ ಗ್ರಾಮದ ಅಂತರ್ಜಲ ಕೈಗಾರಿಕಾ ತ್ಯಾಜ್ಯದಿಂದ ಕಲುಷಿತವಾಗಿದ್ದರೆ, ಮತ್ತೊಮ್ಮೆ ಪರಿಶೀಲನೆ ನಡೆಸಿ, ಸೂಕ್ತ ಕ್ರಮ ಕೈಗೊಳ್ಳುವುದಾಗಿ ಅರಣ್ಯ, ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ತಿಳಿಸಿದ್ದಾರೆ.

ವಿಧಾನಪರಿಷತ್‌ನಲ್ಲಿಂದು ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಸೂರಜ್ ರೇವಣ್ಣ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ವರದಿ ಪ್ರಕಾರ ಕೊಳವೆ ಬಾವಿಗಳ ನೀರು ಕಲುಶಿತವಾಗಿರುವುದಿಲ್ಲ ಮತ್ತು ಕುಡಿಯುವ ನೀರಿನ ಗುಣಮಟ್ಟಕ್ಕೆ ಅನುಮತಿಸಿದ ಮಿತಿಯೊಳಗಿದೆ ಎಂದು ಹೇಳಿದ್ದಾರೆ.

ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳಿಗೆ ನೀರಿನ ಗುಣಮಟ್ಟ ಪರೀಕ್ಷಿಸಿ ಮೂರು ದಿನಗಳ ಒಳಗಾಗಿ ವರದಿ ನೀಡುವಂತೆ ಸೂಚನೆ ನೀಡಿದ್ದಾರೆ.

ಇದೇ ವೇಳೆ, ಆನೆ -ಮಾನವ ಸಂಘರ್ಷ ನಿಯಂತ್ರಿಸಲು ಪ್ರಸಕ್ತ ಸಾಲಿನಲ್ಲಿ ಮಡಿಕೇರಿ ವಿಭಾಗಗಕ್ಕೆ ಏಳು ಕಿಲೋಮೀಟರ್ ಮತ್ತು ನಾಗರಹೊಳೆ ವಿಭಾಗಕ್ಕೆ ೨೦ ಕಿಲೋಮೀಟರ್ ರೈಲು ಹಳಿ ತಡೆಗೋಡೆ ಮಂಜೂರಾಗಿದ್ದು, ಶೀಘ್ರವೇ ಕಾಮಗಾರಿ ಆರಂಭಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

***************

ಭಾರತೀಯ ರೈಲ್ವೆಯ ಮೂಲಸೌಕರ್ಯ ಮತ್ತು ತಂತ್ರಜ್ಞಾನ ಬಲಪಡಿಸಲು ಹಾಗೂ ಸಂವಹನ ವ್ಯವಸ್ಥೆಗಳನ್ನು ಆಧುನೀಕರಿಸಲು ೭೬೫ ಕೋಟಿ ರೂಪಾಯಿಗಳ ಯೋಜನೆಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ.

ದಕ್ಷಿಣ ನೈಋತ್ಯ ರೈಲ್ವೆ ಅಡಿಯಲ್ಲಿ ೧೨೬ ಕಿಲೋಮಿಟರ್ ರಾಯಚೂರು - ಗುಂತಕಲ್ ವಿಭಾಗದಲ್ಲಿ ವಿದ್ಯುತ್ ವ್ಯವಸ್ಥೆ ನವೀಕರಣಕ್ಕಾಗಿ ೨೫೯ ಕೋಟಿ ರೂಪಾಯಿ ಅನುದಾನ ಮಂಜೂರು ಮಾಡಿದೆ.

ಈ ಯೋಜನೆ, ವಿದ್ಯುತ್ ಸರಬರಾಜು ಸಾಮರ್ಥ್ಯವನ್ನು ಸುಧಾರಿಸಲಿದೆ ಮತ್ತು ಮುಂಬೈ ಚೆನ್ನೈ ಮಾರ್ಗದಲ್ಲಿ ವೇಗವಾಗಿ ಪ್ರಯಾಣಿಕ ಮತ್ತು ಸರಕ ರೈಲುಗಳನ್ನು ನಿರ್ವಹಿಸಲು ಸಹಾಯ ಮಾಡಲಿದೆ.

***************

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷರಾಗಿ ಆರು ವರ್ಷಗಳನ್ನು ಪೂರೈಸಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದಿಸಿದ್ದಾರೆ.

ಡಿ.ಕೆ.ಶಿವಕುಮಾರ್ ಅವರ ಸಂಘಟನಾ ಸಾಮರ್ಥ್ಯ ಮತ್ತು ಪಕ್ಷದ ಬದ್ಧತೆಯನ್ನು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಶ್ಲಾಘಿಸಿದ್ದಾರೆ.

ಅವರ ನಾಯಕತ್ವ ಲಕ್ಷಾಂತರ ಕಾಂಗ್ರೆಸ್ ಕಾರ್ಯಕರ್ತರಿಗೆ ಸ್ಫೂತಿದಾಯಕವಾಗಿದೆ ಎಂದು ಹೇಳಿದ್ದಾರೆ.

೨೦೨೮ರಲ್ಲಿ ಕಾಂಗ್ರೆಸ್ ಪಕ್ಷ ಮತ್ತೆ ಅಧಿಕಾರಕ್ಕೆ ಬರಲಿದೆ. ಪಕ್ಷವನ್ನು ಅಧಿಕಾರಕ್ಕೆ ತರಲು ಅವರ ಪಕ್ಷದ ಸಂಘಟನಾ ಕೆಲಸ ಮತ್ತು ಹೋರಾಟಗಳಲ್ಲಿ ತಾವು ಭಾಗವಹಿಸುವುದಾಗಿ ತಿಳಿಸಿದ್ದಾರೆ.

***************

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧದ ಪರಿಣಾಮ ವಾಣಿಜ್ಯ ಬಳಕೆಯ ಸಿಲಿಂಡರ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದ್ದು ಇದನ್ನು ಸರಿಪಡಿಸುವಂತೆ ಚಾಮರಾಜನಗರ ಜಿಲ್ಲಾ ಹೋಟೆಲ್ ಮಾಲೀಕರ ಸಂಘ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದೆ.

ಜಿಲ್ಲಾಧಿಕಾರಿ ಶ್ರೀರೂಪಾ ಅವರನ್ನು ಭೇಟಿಯಾದ ಸಂಘದ ಪದಾಧಿಕಾರಿಗಳು, ವಾಣಿಜ್ಯ ಬಳಕೆ ಗ್ಯಾಸ್ ಸರಬರಾಜಿನಲ್ಲಿ ಆಗುತ್ತಿರುವ ತೊಂದರೆ ಸರಿಪಡಿಸಿ ಹೋಟೆಲ್ ಉದ್ಯಮ ನಡೆಸಲು ಅವಕಾಶ ಕಲ್ಪಿಸಿಕೊಡಬೇಕು ಎಂದು ಮನವಿ ಸಲ್ಲಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಜಿಲ್ಲಾಧಿಕಾರಿ, ಸರ್ಕಾರಕ್ಕೆ ನಿಮ್ಮ ಮನವಿ ರವಾನಿಸಿ, ಸಮಸ್ಯೆ ಸರಿಪಡಿಲು ಕ್ರಮವಹಿಸುವುದಾಗಿ ಭರವಸೆ ನೀಡಿದ್ದಾರೆ.

***************

ಜಿಬಿಎ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಕಡಿಮೆ ಮೌಲ್ಯಯುತ ಪ್ಲಾಸ್ಟಿಕ್ ಅನ್ನು ರಸ್ತೆ ಡಾಂಬರೀಕರಣಕ್ಕೆ ಬಳಸಿಕೊಳ್ಳಲು ಕ್ರಮ ಕೈಗೊಳ್ಳುವಂತೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಸ್ವಚ್ಛ ಸರ್ವೇಕ್ಷಣಾ ೨೦೨೫-೨೬ ರ ಅಂಗವಾಗಿ ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಅಂಜನಾಪುರ ವಾರ್ಡ್ ವ್ಯಾಪ್ತಿಯ ಪೌರಕಾರ್ಮಿಕರ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿದ ಅವರು, ಮೂಲದಲ್ಲಿಯೇ ತ್ಯಾಜ್ಯವನ್ನು ವಿಂಗಡಿಸಿ, ನೀಡುವ ಮೂಲಕ ಕಡಿಮೆ ಮೌಲ್ಯಯುತ ಪ್ಲಾಸ್ಟಿಕ್

ಉತ್ಪತ್ತಿ ಪ್ರಮಾಣವನ್ನು ಹೆಚ್ಚಿಸಬೇಕು. ಇದನ್ನು ರಸ್ತೆ ಡಾಂಬರೀಕರಣ ಕಾರ್ಯಗಳಲ್ಲಿ ಬಳಸಿಕೊಳ್ಳಲು ಮುಂದಾಗಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

***************

ಬಾಗಲಕೋಟೆ ಜಿಲ್ಲೆಯಲ್ಲಿ ಇದೇ ೧೪ ರಂದು ನಡೆಯಲಿರುವ ಸರಕಾರಿ ವೈದ್ಯಕೀಯ ಕಾಲೇಜು ಶಂಕುಸ್ಥಾಪನೆ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನೆರವೇರಿಸಲಿದ್ದಾರೆ.

ಈ ಹಿನ್ನಲೆಯಲ್ಲಿ ಕಾರ್ಯಕ್ರಮ ಯಶಸ್ವಿಗೆ ಅಗತ್ಯ ಸಿದ್ದತೆಗಳನ್ನು ಕೈಗೊಳ್ಳುವಂತೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಯ ಯೋಜನೆ ಫಲಾನುಭವಿಗಳಿಗೆ ಸಾಂಕೇತಿಕವಾಗಿ ಸೌಭ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

***************

ಸಂಕ್ಷಿಪ್ತ ಸುದ್ದಿಗಳು

೧. ೨೦೨೭ರ ಜನಗಣತಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತದಿಂದ ಸಕಲ ಸಿದ್ಧತೆ ಕೈಗೊಳ್ಳಲಾಗಿದ್ದು, ಮೂರು ದಿನಗಳ ಕಾಲ ನಿಯೋಜಿತ ಅಧಿಕಾರಿಗಳಿಗೆ ಹಾಗೂ ಗಣತಿದಾರರಿಗೆ ತರಬೇತಿ ನೀಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ಕೆ.ಎನ್.ಅನುರಾಧ ತಿಳಿಸಿದ್ದಾರೆ.

೨. ಹಾವೇರಿ ಜಿಲ್ಲೆಯ ೮೧ ಪರೀಕ್ಷಾ ಕೇಂದ್ರಗಳಲ್ಲಿ ಇದೇ ೧೮ರಿಂದ ಏಪ್ರಿಲ್ ೨ರವರೆಗೆ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷೆಗಳನ್ನು ಸುಗಮವಾಗಿ ಪಾರದರ್ಶಕವಾಗಿ ನಡೆಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

೩. ದಾವಣಗೆರೆ ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ಅಗ್ನಿ ಅವಘಡಗಳನ್ನು ತಡೆಗಟ್ಟಲು ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ

ವತಿಯಿಂದ ವಿಶೇಷ 'ಅರಿವು ಮತ್ತು ಪ್ರಾತ್ಯಕ್ಷಿಕೆ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಅಗ್ನಿ ಶಾಮಕ ಅಧಿಕಾರಿ ವಸಂತ್ ಕುಮಾರ್ ತಿಳಿಸಿದ್ದಾರೆ.

೪. ಕೋಲಾರ ಜಿಲ್ಲೆಯಲ್ಲಿ ರಸ್ತೆ ಅಪಘಾತಗಳ ಸಂಖ್ಯೆಯನ್ನು ಕನಿಷ್ಠ ಮಟ್ಟಕ್ಕೆ ತಗ್ಗಿಸಲು ಹಾಗೂ ಸಾರ್ವಜನಿಕರಲ್ಲಿ ರಸ್ತೆ ಸುರಕ್ಷತೆಯ ಬಗ್ಗೆ ಅರಿವು ಮೂಡಿಸಲು ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ. ಆರ್.ರವಿ ಸೂಚಿಸಿದ್ದಾರೆ.

೫. ದಾವಣಗೆರೆ ಜಿಲ್ಲಾ ನೇತ್ರ ತಜ್ಞರ ಸಂಘದ ವತಿಯಿಂದ ವಿಶ್ವ ಗ್ಲಾಕೋಮಾ ಜಾಗೃತಿ ಸಪ್ತಾಹದ ಅಂಗವಾಗಿ ಸಾರ್ವಜನಿಕರಲ್ಲಿ ಕಣ್ಣಿನ ಕಾಯಿಲೆಗಳ ಕುರಿತು ಅರಿವು ಮೂಡಿಸಲು ದಾವಣಗೆರೆಯಲ್ಲಿಂದು ಹಮ್ಮಿಕೊಳ್ಳಲಾಗಿದ್ದ 'ಗ್ಲಾಕೋಥಾನ್' ವಾಕಥಾನ್ ಯಶಸ್ವಿಯಾಗಿ ನಡೆಯಿತು.

೬. ಬೆಂಗಳೂರು ನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯ್ತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಅಂಬೇಡ್ಕರ್ ಅಧ್ಯಯನ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ *ಭೀಮ ಗಾಯನ* ವಿಶೇಷ ಅಭಿಯಾನ ಕಾರ್ಯಕ್ರಮ ನಡೆಯಿತು.

೭. ಪ್ರವಾಸಿ ಮಾರ್ಗದರ್ಶಿಗಳು ಕೇವಲ ಮಾಹಿತಿ ನೀಡುವವರಲ್ಲ, ಅವರು ನಮ್ಮ ಜಿಲ್ಲೆಯ ಶ್ರೀಮಂತ ಸಂಸ್ಕೃತಿ ಮತ್ತು ಪರಂಪರೆಯನ್ನು ಜಗತ್ತಿಗೆ ಪರಿಚಯಿಸುವ ರಾಯಭಾರಿಗಳು, ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದ್ದಾರೆ.

೮. ಮುಖ್ಯಮಂತ್ರಿಗಳ ಗ್ರಾಮೀಣ ಆಶ್ರಯ ನಿವೇಶನ ಯೋಜನೆಯಡಿ ಚಿಕ್ಕಬಳ್ಳಾಪುರ ಜಿಲೆಯಲ್ಲಿ ವಸತಿ ರಹಿತರಿಗೆ ಮೊದಲು ನಿವೇಶನ ನೀಡಿ ಬಳಿಕ, ಅವರಿಗೆ ಸರ್ಕಾರದ ವತಿಯಿಂದಲೇ ಮನೆಗಳನ್ನು ನಿರ್ಮಿಸಿ ಕೊಡಲು ಜಿಲ್ಲಾಡಳಿತ ಅಗತ್ಯ ಕ್ರಮ ಕೈಗೊಳ್ಳುತ್ತಿದೆ ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ.

೯. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ಜನರ ಶ್ರೇಯಸ್ಸಿಗಾಗಿ ಗಣನೀಯ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿಗಳನ್ನು ಗುರುತಿಸಿ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ

ರಾಂ ಮತ್ತು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಹೆಸರಿನಲ್ಲಿ ಪ್ರಶಸ್ತಿಗಳನ್ನು ನೀಡಿ ಗೌರವಿಸಲು ಗದಗ ಜಿಲ್ಲೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

೧೦. ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಸಂಜೀವಿನಿ ಎನ್.ಆರ್.ಎಲ್.ಎಂ ಯೋಜನೆಯಡಿ ನಾಳೆ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾ ಮಟ್ಟದ ಮಾರಾಟ ಮೇಳ ಆಯೋಜಿಸಲಾಗಿದೆ.

*******ಮುಕ್ತಾಯ********